ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಈ ದಿನ ದಿ:23.07.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಪಾಟೀ ಸವಾಲು:- ಆರೋಪಿ ಪರ ಶ್ರೀ ಬಿ.ಎಲ್‌ಎಸ್ (ಬಿವಿಎಲ್) ವಕೀಲರಿಂದ:-**

ಪೊಲೀಸರು ನನಗೆ ಪಂಚರಾಗುವಂತೆ ನೋಟಿಸ್ ನೀಡಿರುವುದಿಲ್ಲ. ಠಾಣೆಯಿಂದ ಘಟನಾ ಸ್ಥಳಕ್ಕೆ ಮಧ್ಯಾಹ್ನ 3:00 ಗಂಟೆಗೆ ಹೋಗಿರುತ್ತೇನೆ. ಠಾಣೆಯಿಂದ ಘಟನಾ ಸ್ಥಳ 3 ಕಿ.ಮಿ ಅಂತರದಲ್ಲಿದೆ. ಘಟನಾ ಸ್ಥಳದಲ್ಲಿ 50 ರಿಂದ 100 ಜನ ಸೇರಿದ್ದರು ಎಂದರೆ ಸರಿಯಲ್ಲ. ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆಯ ಸಿಬ್ಬಂದಿ ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿ ಹೋಗಿದ್ದೆವು. ಮಹಜರ್ ಗೆ ಅನೇಕ ಜನರು ಸಹಿ ಹಾಕಿರುತ್ತಾರೆ. ಘಟನಾ ಸ್ಥಳದ ಚಕ್ಕುಬಂದಿ ಹೇಳಲು ಬರುವುದಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿತರು ಘಟನಾ ಸ್ಥಳದಲ್ಲಿ ಇದ್ದರು. ಸದರಿ ದಿನ ನಾನು ಕರ್ತವ್ಯಕ್ಕೆ ಹೋಗಿರಲಿಲ್ಲ ಎಂದರೆ ಸರಿಯಲ್ಲ. ಸರ್ವೆ ನಂ.69 ರಲ್ಲಿ ನನ್ನನ್ನು ಕರ್ತವ್ಯಕ್ಕೆ ನಿಯೋಜಿಸಿದ್ದರು ಎಂದರೆ ಸರಿಯಲ್ಲ. ಸರ್ವೆ ನಂ.1 ರಲ್ಲಿ ಘಟನೆಯಾಗಿರುತ್ತದೆ. ನಾನು ಘಟನಾ ಸ್ಥಳಕ್ಕೆ ಹೋಗಿರಲಿಲ್ಲ, ನನ್ನ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸದರಿ ದಿನ ಕರ್ತವ್ಯದಲ್ಲಿ ಇದ್ದೆ ಎಂದು ತೋರಿಸಲು ದಾಖಲೆಗಳನ್ನು ನೀಡಿರುವುದಿಲ್ಲ.

ಈ ಹಂತದಲ್ಲಿ ಆರೋಪಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗೆ ಕಾಲವಾಕಾಶ ಕೇಳಿದ್ದು, ಯಾವುದೇ ಸಕಾರಣಗಳು ಇಲ್ಲದ ಕಾರಣ ಮುಂದುವರೆದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ:- ಇಲ್ಲ.**

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ,

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ.